# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1245 (1015) |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | **23/12/2021** |
| ಉತ್ತರಿಸುವವರು | ಕಾರ್ಮಿಕ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ಪ್ರಸ್ತುತ ಜಾರಿ ಮಾಡಲಾಗುತ್ತಿರುವ ರಾಜ್ಯ ಸರ್ಕಾರದ ಯೋಜನೆಗಳು ಯಾವುವು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಯಾವುದೇ ಯೋಜನೆಗಳನ್ನು ಜಾರಿಮಾಡುತ್ತಿಲ್ಲ. ಆದರೆ, ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಕಾರ್ಮಿಕ ಮಂಡಳಿಗಳಲ್ಲಿ ಜಾರಿಮಾಡಲಾಗುತ್ತಿರುವ ಕಲ್ಯಾಣ ಯೋಜನೆಗಳ ವಿವರ ಈ ಕೆಳಗಿನಂತಿದೆ:<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br><br>ಈ ಮಂಡಳಿಯು ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗೆ ರೂಪಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-01** ರಲ್ಲಿ ಲಗತ್ತಿಸಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br><br>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ರಾಜ್ಯ ಸರ್ಕಾರದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ವಿವರ ಈ ಕೆಳಗಿನಂತಿವೆ.<br><br>(1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**<br><br>ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಮತ್ತು ಕ್ಲೀನರ್‌ಗಳು ಫಲಾನುಭವಿಗಳಾಗಿದ್ದು, ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>(ಅ)**ಅಪಘಾತ ಪರಿಹಾರ ಸೌಲಭ್ಯ:**ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ |

| | | |
|---|---|---|
| | | ಪ್ರಕರಣಗಳಲ್ಲಿ ರೂ.2 ಲಕ್ಷದ ವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br>(ಆ) **ಶೈಕ್ಷಣಿಕಧನ ಸಹಾಯ** :ಅಪಘಾತದಕಾರಣ ನಿಧನರಾದ ಹಾಗೂ ಸಂಪೂರ್ಣ ಶಾಶ್ವತದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br><br>**(2) <u>ಅಂಬೇಡ್ಕರ್‌ಕಾರ್ಮಿಕ ಸಹಾಯ ಹಸ್ತ ಯೋಜನೆ:-</u>**<br><br>ಪ್ರಸ್ತುತ ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್‌ಕಾರ್ಡ್ ವಿತರಿಸಲಾಗುತ್ತಿದೆ.<br><br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ</u>**<br><br>ಈ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರಿಗಾಗಿ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಮಂಡಳಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40- ರಂತೆ ವಂತಿಕೆ ಪಾವತಿಸುವ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿ ಸೌಲಭ್ಯಗಳನ್ನು ನೀಡಲಾಗುವುದು.<br>ಮಂಡಳಿಯಿಂದ ಅನುಷ್ಠಾನಗೊಳಿಸಿರುವ ಕಲ್ಯಾಣ ಯೋಜನೆಗಳನ್ನು **ಅನುಬಂಧ-2** ರಲ್ಲಿ ಒದಗಿಸಿದೆ. |
| ಆ) | ಕಳೆದ 3 ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಅಂತಹ ಯೋಜನೆಗಳನ್ನು ಫಲಾನುಭವಿಗಳಿಗೆ ಕಲ್ಪಿಸಲಾಗಿದೆಯೇ; (ತಾಲ್ಲೂಕುವಾರು ವಿವರ ನೀಡುವುದು) | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**<br>ಕಳೆದ 3 ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ಸಹಾಯ ಧನ ವಿತರಿಸಲಾಗಿದ್ದು, ವಿತರಿಸಿರುವ ಸೌಲಭ್ಯಗಳ ತಾಲ್ಲೂಕುವಾರು ವಿವರವನ್ನು **ಅನುಬಂಧ-03** ರಲ್ಲಿ ಲಗತ್ತಿಸಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**<br><br>ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ, ವಿತರಿಸಿರುವ ಸೌಲಭ್ಯಗಳ |

ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ.

| ತಾಲ್ಲೂಕು | ಅಪಘಾತ ಪರಿಹಾರ | ಪರಿಹಾರದ ಮೊತ್ತ | ಶೈಕ್ಷಣಿಕಧನ ಸಹಾಯ | ಮೊತ್ತ |
|---|---|---|---|---|
| ಕೃಷ್ಣರಾಜಪೇಟೆ | 1 | ರೂ.5,00,000/- | - | - |
| ಮದ್ದೂರು | 6 | ರೂ.30,00,000/- | 4 | ರೂ.40,000/- |
| ಮಳವಳ್ಳಿ | 4 | ರೂ.20,00,000/- | - | - |
| ಮಂಡ್ಯ | 10 | ರೂ.43,40,000/- | 2 | ರೂ.20,000/- |
| ನಾಗಮಂಗಲ | 3 | ರೂ.15,00,000/- | - | - |
| ಪಾಂಡವಪುರ | 1 | ರೂ.83,511/- | - | - |
| ಶ್ರೀರಂಗಪಟ್ಟಣ | 1 | ರೂ.5,00,000/- | - | - |
| **ಒಟ್ಟು** | **26** | **ರೂ.1,19,23,511/-** | **6** | **ರೂ.60,000/-** |

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ**

ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಯಡಿ ನೀಡಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.

| ಕ್ರಸ | ವರ್ಷ | ಫಲಾನುಭವಿಗಳು | ಮೊತ್ತ |
|---|---|---|---|
| 1 | 2018-19 | 1077 | 4135000 |
| 2 | 2019-20 | 1422 | 5420000 |
| 3 | 2020-21 | 437 | 1995000 |

ತಾಲ್ಲೂಕುವಾರು ವಿವರಗಳು **ಅನುಬಂಧ-4** ರಲ್ಲಿ ಲಗತ್ತಿಸಿದೆ.

### ಇ)

ಮಂಡ್ಯ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಲ್ಲಿ ಯಾರು ಯಾರು ಸಂಘಟಿತ ಮತ್ತು ಅಸಂಘಟಿತ ವಲಯದಲ್ಲಿ ತಮ್ಮ ಹೆಸರನ್ನು ನೋಂದಾಯಿಸಿದ್ದಾರೆ;
(ತಾಲ್ಲೂಕುವಾರು ವಿವರ ನೀಡುವುದು)

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**

ಅಸಂಘಟಿತ ವಲಯಕ್ಕೆ ಸೇರಿದ 52 ವರ್ಗದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರುಮಂಡ್ಯ ಜಿಲ್ಲೆಯಲ್ಲಿ19,853 ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಿಕೊಂಡಿರುತ್ತಾರೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ:

| **ಕ್ರ.ಸಂ** | **ವೃತ್ತ** | **ಸಂಖ್ಯೆ** |
|---|---|---|
| 1 | ಮಂಡ್ಯ | 4934 |
| 2 | ಮಳವಳ್ಳಿ | 3696 |
| 3 | ಪಾಂಡವಪುರ | 1550 |
| 4 | ಶ್ರೀರಂಗಪಟ್ಟಣ | 2056 |
| 5 | ಕೆ.ಆರ್ ಪೇಟೆ | 2918 |
| 6 | ಮದ್ದೂರು | 3213 |
| 7 | ನಾಗಮಂಗಲ | 1486 |
| | **ಒಟ್ಟು** | **19853** |

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**

ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ, ವಿವಿಧ ಯೋಜನೆಗಳಡಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ವಿವರ ಈ ಕೆಳಕಂಡಂತಿದೆ.

- ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ, ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳನ್ನು ಚಲಾಯಿಸಲು ಸಾರಿಗೆ ಇಲಾಖೆಯಿಂದ ಊರ್ಜಿತ ಚಾಲನ ಪರವಾನಗಿ ಹೊಂದಿರುವ ಎಲ್ಲಾ ಚಾಲಕರು ಫಲಾನುಭವಿಯಾಗಿದ್ದು, ಮಂಡಳಿಯಿಂದ ಪ್ರತ್ಯೇಕವಾಗಿ ನೋಂದಣಿ ಪ್ರಕ್ರಿಯೆ ನಡೆಸುತ್ತಿಲ್ಲ, ಆದ್ದರಿಂದ, ಸದರಿ ವರ್ಗದ ದತ್ತಾಂಶ ಲಭ್ಯವಿರುವುದಿಲ್ಲ.
- ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಮಂಡ್ಯ ಜಿಲ್ಲೆಯಲ್ಲಿ ನೋಂದಾಯಿತ 11 ಅಸಂಘಟಿತ ವರ್ಗಗಳ ಕಾರ್ಮಿಕರ ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ.

| **ತಾಲ್ಲೂಕು** | **ಕಾರ್ಮಿಕರ ಸಂಖ್ಯೆ** |
|---|---|
| ಕೃಷ್ಣರಾಜಪೇಟೆ | 485 |
| ಮದ್ದೂರು | 1023 |
| ಮಳವಳ್ಳಿ | 647 |
| ಮಂಡ್ಯ | 2437 |
| ನಾಗಮಂಗಲ | 307 |
| ಪಾಂಡವಪುರ | 456 |
| ಶ್ರೀರಂಗಪಟ್ಟಣ | 490 |
| **ಒಟ್ಟು** | **5845** |

ಈ) ಸದರಿ ಸಂಘಟಿತ ಮತ್ತು ಅಸಂಘಟಿತ ವಲಯದ ನೋಂದಾಯಿತ ಕಾರ್ಮಿಕರಿಗೆ ಸರ್ಕಾರಿ ಸೌಲಭ್ಯ ನೀಡಲಾಗಿದೆಯೇ; ಸದರಿಯವರಿಗೆ ನೀಡಲಾದ ಸೌಲಭ್ಯಗಳಾವುವು?

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**

ಮಂಡಳಿಯ 9,88,268 ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳಡಿ ರೂ. 1093.10 ಕೋಟಿಗಳಷ್ಟು ಸಹಾಯ ಧನ ವಿತರಿಸಲಾಗಿದೆ. ಸೌಲಭ್ಯವಾರು ವಿವರವನ್ನು **ಅನುಬಂಧ-05** ರಲ್ಲಿ ಲಗತ್ತಿಸಿದೆ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**

ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ, ನೋಂದಾಯಿತ ಅಸಂಘಟಿತ ವರ್ಗಗಳ ಕಾರ್ಮಿಕರಿಗೆ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ನೀಡಲಾದ

| | | |
|---|---|---|
| | | ಸೌಲಭ್ಯಗಳ ವಿವರವನ್ನು ಉಪ ಪ್ರಶ್ನೆ (ಆ)ರಲ್ಲಿ ನೀಡಲಾಗಿದೆ.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ**<br>ಈ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರಿಗಾಗಿ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಮಂಡಳಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40- ರಂತೆ ವಂತಿಕೆ ಪಾವತಿಸುವ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿ ಸೌಲಭ್ಯಗಳನ್ನು ನೀಡಲಾಗುವುದು.<br>ಮಂಡಳಿಯಿಂದ ಅನುಷ್ಠಾನಗೊಳಿಸಿರುವ ಕಲ್ಯಾಣ ಯೋಜನೆಗಳು ಅನುಬಂಧ-2 ರಲ್ಲಿ ಒದಗಿಸಿದೆ. |

**ಕಾಇ 558 ಎಲ್‌ಇಟಿ 2021**

(ಅರಬೈಲ್ ಶಿವರಾಮ ಹೆಬ್ಬಾರ್)
**ಕಾರ್ಮಿಕ ಸಚಿವರು**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1245 (1015)ಕ್ಕೆ ಅನುಬಂಧ-01**

**<u>ಕರ್ನಾಟಕಕಟ್ಟಡ ಮತ್ತುಇತರೆ ನಿರ್ಮಾಣಕಾರ್ಮಿಕರಕಲ್ಯಾಣ ಮಂಡಳಿವತಿಯಿಂದ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು</u>**

1. **ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ** ಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ**ಮರುಪಾವತಿ ಸೌಲಭ್ಯ.
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಬಿತರಿಗೆ
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತುಗಂಡು ಮಗುವಿನ ಜನನಕ್ಕೆ **ರೂ.20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | ವಾರ್ಷಿಕ ಸಹಾಯಧನ | |
|---|---|---|---|
| | | ಗಂಡು | ಹೆಣ್ಣು |
| I. | ನರ್ಸರಿ | | |
| II. | 1 ರಿಂದ 4ನೇ ತರಗತಿ | 3,000 | 4,000 |
| III. | 5 ರಿಂದ 8ನೇ ತರಗತಿ | 3,000 | 4,000 |
| IV. | 9 ಹಾಗೂ 10ನೇ ತರಗತಿ | 5,000 | 6,000 |
| V. | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 10,000 | 11,000 |
| VI. | ಐಟಿಐ | 10,000 | 14,000 |
| VII. | ಪದವಿ ಪ್ರತಿ ವರ್ಷಕ್ಕೆ | 12,000 | 15,000 |
| VIII. | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 15,000 | 20,000 |
| | ಮತ್ತುಪ್ರತಿ ವರ್ಷಕ್ಕೆ | 20,000 | 20,000 |
| IX. | ಇಂಜಿನಿಯರಿಂಗ್‌ಕೋರ್ಸ್ ಬಿಇ/ ಬಿ.ಟೆಕ್ ಸೇರ್ಪಡೆಗೆ | 20,000 | 25,000 |
| | ಮತ್ತುಪ್ರತಿ ವರ್ಷಕ್ಕೆ | 25,000 | 25,000 |
| X. | ವೈದ್ಯಕೀಯಕೋರ್ಸ್‌ಗೆ ಸೇರ್ಪಡೆಗೆ | 25,000 | 30,000 |
| | ಮತ್ತುಪ್ರತಿ ವರ್ಷಕ್ಕೆ | 30,000 | 30,000 |
| XI. | ಡಿಪ್ಲೋಮಾ | 40,000 | 50,000 |
| XII. | ಎಂ.ಟೆಕ್ / ಎಂ.ಇ | 15,000 | 20,000 |
| XIII. | ಎಂ.ಡಿ (ವೈದ್ಯಕೀಯ) | 30,000 | 35,000 |
| XIV. | ಪಿಹೆಚ್‌ಡಿ (ಪ್ರತಿ ವರ್ಷಕ್ಕೆ) ಗರಿಷ್ಠ 03 ವರ್ಷ | 45,000 | 55,000 |
| | | 25,000 | 30,000 |

12. **ವೈದ್ಯಕೀಯ ಸಹಾಯಧನ (ಕಾರ್ಮಿಕಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರಅವಲಂಭಿತರಿಗೆ**ರೂ.300/-** ರಿಂದ**ರೂ.10,000/-**ವರೆಗೆ
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ**ರೂ.5,00,000/-**, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ **ರೂ.2,00,000/-** ಮತ್ತುಭಾಗಶಃ ಶಾಶ್ವತದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲುತೆಗೆಯುವಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
15. **ಮದುವೆಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾಅವರಇಬ್ಬರು ಮಕ್ಕಳ ಮದುವೆಗೆತಲಾ **ರೂ.50,000/-**
16. **ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತು ಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.**

17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿತೊಡಗಿರುವ ನೋಂದಾಯಿತಕಾರ್ಮಿಕರಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ**ರೂ.6,000/-** ಗಳ ಸಹಾಯಧನ.

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1245 (1015)ಕ್ಕೆ ಅನುಬಂಧ-2

### :ಕಾರ್ಮಿಕ ಕಲ್ಯಾಣ ಯೋಜನೆಗಳ ವಿವರ:

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ. ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ಸಂಸ್ಥೆಗಳು/ಪ್ಲಾಂಟೇಶನ್/ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಯೋಜನೆಗಳು ಜಾರಿಯಲ್ಲಿರುತ್ತದೆ.

<u>ಸೂಚನೆ :</u>

1. ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 15 ರೊಳಗೆ ಕಾರ್ಮಿಕರು, ಮಾಲೀಕರು ರೂ. 20 : 40 ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಒಟ್ಟು ರೂ. 60/- ಗಳಂತೆ ವಂತಿಕೆಯನ್ನು ಕಾರ್ಮಿಕ ಕಲ್ಯಾಣ ನಿಧಿಗೆ ಪಾವತಿಸತಕ್ಕದ್ದು.
2. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ವಿದ್ಯಾರ್ಥಿಗಳು, ಶೈಕ್ಷಣಿಕ ಸಂಸ್ಥೆಗಳು, ಕಾರ್ಖಾನೆಗಳು/ಸಂಸ್ಥೆಗಳು www.klwb.karnataka.gov.in ಇಲ್ಲಿ ನೊಂದಾಯಿಸಿ ಅನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ.
3. ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು www.klwb.karnataka.gov.in ಇಲ್ಲಿ ತಮ್ಮ ಸಂಸ್ಥೆಗಳನ್ನು ನೊಂದಾಯಿಸಿ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

### <u>ಈ ಕೆಳಗಿನ ಯೋಜನೆಗಳಿಗೆ ಮಾಸಿಕ ವೇತನ ರೂ. 21,000/- ಗಿಂತ ಮೀರಿರಬಾರದು. ವಯೋಮಿತಿ 18- 60</u>

1. **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ: ಪ್ರೌಢ ಶಾಲೆ,** (8 ರಿಂದ 10ನೇ ತರಗತಿವರೆಗೆ) ರೂ.3,000/ ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.4,000/-ಪದವಿ ಶಿಕ್ಷಣಕ್ಕಾಗಿ ರೂ.5,000/ ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.6,000/-ಇಂಜಿನೀಯರಿಂಗ್/ವೈದ್ಯಕೀಯ ಶಿಕ್ಷಣಕ್ಕಾಗಿ ರೂ.10,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು.**(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ.ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)**

2. **ಕಾರ್ಮಿಕರಿಗೆ ವೈದ್ಯಕೀಯ ನೆರವು :** ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ **ರೂ. 1,000/**-ದಿಂದ ಗರಿಷ್ಠ **ರೂ,25,000/**-ವರೆಗೆ ಮತ್ತು ಆರೋಗ್ಯ ತಪಾಸಣೆಗೆ ರೂ. **500**/-ರಿಂದ ರೂ, **1000**/-ವರೆಗೆ ಧನ ಸಹಾಯ ನೀಡಲಾಗುವುದು.

3. **ಕಾರ್ಮಿಕರಿಗೆ ಅಪಘಾತ ಧನ ಸಹಾಯ :** ಕಾರ್ಮಿಕರಿಗೆ ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಕನಿಷ್ಠ **ರೂ. 1,000**/- ಗರಿಷ್ಠ **ರೂ. 10,000**/- ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4. **ಹೆರಿಗೆ ಭತ್ಯೆ ಸೌಲಭ್ಯ :** ಮಹಿಳಾ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಭತ್ಯೆ ಸೌಲಭ್ಯವನ್ನು ತಲಾ **ರೂ. 10,000/**- ಧನ ಸಹಾಯ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

**<u>ಈ ಕೆಳಗಿನ ಯೋಜನೆಗಳಿಗೆ ಮಾಸಿಕ ಸಂಬಳದ ಮಿತಿಯಿರುವುದಿಲ್ಲ. ವಯೋಮಿತಿ 18– 60</u>**

5. **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ** :ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತಪಟ್ಟ ಆರು ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, **ರೂ. 10,000/-** ಧನ ಸಹಾಯ ನೀಡಲಾಗುವುದು.

6. **ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ :** ನೋಂದಾಯಿತ ಕಾರ್ಮಿಕ ಸಂಘಟನೆಗಳು/ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ **ರೂ. 1,00,000/-** ಧನ ಸಹಾಯ ನೀಡಲಾಗುವುದು.

7. **ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ :** ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ **ರೂ. 1,00,000/-** ಧನ ಸಹಾಯ ನೀಡಲಾಗುವುದು.

**(ಧನ ಸಹಾಯವನ್ನು ಫಲಾನುಭವಿಗಳ ಉಳಿತಾಯ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್ ಮೂಲಕ ಜಮಾ ಮಾಡಲಾಗುವುದು).**

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1245 (1015)ಕ್ಕೆ ಅನುಬಂಧ–4

2018–19ನೇ ಸಾಲಿನಿಂದ 2020–21ನೇ ಸಾಲಿನವರೆಗೆ ಮಂಡ್ಯ ಜಿಲ್ಲೆಯಲ್ಲಿ ಕಾರ್ಮಿಕ ಕಲ್ಯಾಣ ಯೋಜನೆಯಡಿ ಸೌಲಭ್ಯ ನೀಡಿರುವ ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

| ವರ್ಷ | | 2018–19 | | 2019–20 | | 2020–21 | |
|---|---|---|---|---|---|---|---|
| ಕ್ರ.ಸಂ | ತಾಲ್ಲೂಕು | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ |
| 1 | ಮಂಡ್ಯ | 112 | 425600 | 166 | 630800 | 242 | 1053000 |
| 2 | ಮಳವಳ್ಳಿ | 88 | 334400 | 48 | 182400 | 31 | 115000 |
| 3 | ಮದ್ದೂರು | 581 | 2207800 | 690 | 2622000 | 108 | 434000 |
| 4 | ನಾಗಮಂಗಲ | 36 | 136800 | 56 | 212800 | 10 | 78000 |
| 5 | ಕೃಷ್ಣರಾಜಪೇಟೆ | 44 | 167200 | 76 | 288800 | 6 | 55000 |
| 6 | ಪಾಂಡವಪುರ | 96 | 407200 | 251 | 970200 | 2 | 9000 |
| 7 | ಶ್ರೀರಂಗಪಟ್ಟಣ | 120 | 456000 | 135 | 513000 | 38 | 251000 |
| | ಒಟ್ಟು | 1077 | 4135000 | 1422 | 5420000 | 437 | 1995000 |

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: **1245 (1015)**ಕ್ಕೆ
ಅನುಬಂಧ–**03**

ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ಸಹಾಯ ಧನ ವಿತರಿಸಿದ ತಾಲ್ಲೂಕುವಾರು ವಿವರ

| ವೃತ್ತ | ಶೈಕ್ಷಣಿಕ ಧನಸಹಾಯ | ಮದುವೆ ಧನಸಹಾಯ | ವೈದ್ಯಕೀಯ ವೆಚ್ಚ | ಹೆರಿಗೆ ಧನಸಹಾಯ | ಪ್ರಮುಖ ವೈದ್ಯಕೀಯ | ಅಂತ್ಯ ಸಂಸ್ಕಾರಕ್ಕೆ ವೆಚ್ಚ | ಅಪಘಾತ ಪರಿಹಾರ | ತಾಯಿ ಮಗು ಸಹಾಯ ಹಸ್ತ |
|---|---|---|---|---|---|---|---|---|
| ಮಂಡ್ಯ | 929 | 251 | 3 | 0 | 78 | 59 | 0 | 0 |
| ಮಳವಳ್ಳಿ | 637 | 154 | 5 | 10 | 52 | 59 | 0 | 0 |
| ಪಾಂಡವಪುರ | 238 | 65 | 0 | 0 | 46 | 47 | 3 | 2 |
| ಶ್ರೀರಂಗಪಟ್ಟಣ | 362 | 87 | 1 | 0 | 31 | 12 | 0 | 0 |
| ಕೆ.ಆರ್ ಪೇಟೆ | 591 | 74 | 1 | 0 | 25 | 19 | 0 | 0 |
| ಮದ್ದೂರು | 539 | 135 | 4 | 11 | 17 | 22 | 0 | 0 |
| ನಾಗಮಂಗಲ | 183 | 60 | 1 | 0 | 28 | 48 | 1 | 0 |

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1245 (1015)ಕ್ಕೆ ಅನುಬಂಧ-೦೫

### 2007 ರಿಂದ ಅಕ್ಟೋಬರ್-2021 ರವರೆಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿಯಲ್ಲಿ ವಿತರಿಸಲಾದ ವರ್ಷವಾರು ಸಾಧನೆಯ ವಿವರ

| ಸೌಲಭ್ಯಗಳ ವಿವರ | 2007-08 ರಿಂದ 2012-13 ರವರೆಗೆ | | 2013-14 ರಿಂದ 2017-18 ರವರೆಗೆ | | 2018-19 ರಿಂದ 2019-20 ರವರೆಗೆ | | 2020-21 | | 2021-2022 | | ಒಟ್ಟು | |
|---|---|---|---|---|---|---|---|---|---|---|---|---|
| | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಶೈಕ್ಷಣಿಕ ಧನಸಹಾಯ | 10,896 | 2,76,79,600 | 2,27,489 | 1,03,81,26,292 | 2,21,040 | 1,25,80,68,282 | 1,15,538 | 86,93,66,430 | 98,741 | 1,00,11,92,609 | 6,73,704 | 4,19,44,33,213 |
| ಮದುವೆ ಧನಸಹಾಯ | 2,126 | 1,51,60,000 | 23,514 | 1,16,14,15,000 | 22,346 | 92,94,71,000 | 16,183 | 41,97,30,000 | 13,913 | 53,67,89,000 | 78,082 | 3,06,25,65,000 |
| ಅಂತ್ಯ ಸಂಸ್ಕಾರಕ್ಕೆ ವೆಚ್ಚ | 1,376 | 2,09,21,000 | 6,368 | 32,84,54,619 | 5,882 | 31,59,23,000 | 3,342 | 18,07,06,000 | 3,322 | 17,92,57,800 | 20,290 | 1,02,52,62,419 |
| ಪ್ರಮುಖ ವೈದ್ಯಕೀಯ | 233 | 81,04,269 | 2,272 | 6,39,82,540 | 1,308 | 3,54,97,780 | 1,235 | 4,67,00,314 | 1,046 | 5,17,02,496 | 6,094 | 20,59,87,399 |
| ಅಪಘಾತ ಪರಿಹಾರ | 195 | 1,47,77,740 | 185 | 2,55,74,260 | 174 | 4,57,38,000 | 129 | 2,20,59,000 | 105 | 2,45,67,500 | 788 | 13,27,16,500 |
| ನೊಂದಾಯಿತರಲ್ಲದ ಕಟ್ಟಡ ಕಾರ್ಮಿಕರ ಮರಣ ಪರಿಹಾರ | 0 | 0 | 0 | 0 | 0 | 0 | 14 | 29,00,000 | 10 | 24,00,000 | 24 | 53,00,000 |
| ಹೆರಿಗೆ ಧನಸಹಾಯ | 365 | 21,92,000 | 1,677 | 2,47,21,500 | 1,124 | 2,10,90,174 | 81 | 16,50,000 | 156 | 36,10,000 | 3,403 | 5,32,63,674 |
| ವೈದ್ಯಕೀಯ ವೆಚ್ಚ | 779 | 7,42,750 | 268 | 5,65,048 | 287 | 76,12,255 | 212 | 25,30,550 | 212 | 15,89,049 | 1,758 | 1,30,39,652 |
| ಉಪಕರಣ ಖರೀದಿಗೆ ಸಾಲ | 3 | 14,890 | 17 | 85,000 | 0 | 0 | 0 | 0 | | | 20 | 99,890 |
| ಪಿಂಚಣಿ ಸೌಲಭ್ಯ | 0 | 0 | 759 | 91,31,000 | 1,147 | 3,50,78,000 | 643 | 2,86,24,000 | 3,133 | 2,13,69,000 | 5,682 | 9,42,02,000 |
| ದುರ್ಬಲತೆ ಪಿಂಚಣಿ | 0 | 0 | 11 | 16,08,000 | 23 | 42,13,000 | 5 | 12,90,000 | 96 | 38,06,000 | 135 | 1,09,17,000 |
| ಕುಟುಂಬ ಪಿಂಚಣಿ | 0 | 0 | 0 | 0 | 0 | 0 | 5 | 24,000 | 7 | 30,000 | 12 | 54,000 |
| ಅನಿಲ ಭಾಗ್ಯ | 0 | 0 | 0 | 2,00,00,000 | 4,055 | 0 | 0 | 0 | | | 4,055 | 2,00,00,000 |
| ಶ್ರಮ ಸಾಮರ್ಥ್ಯ | 0 | 0 | 1,854 | 8,39,95,481 | 3,780 | 14,71,43,192 | 40,385 | 5,71,47,550 | 70,645 | 19,97,33,246 | 1,16,664 | 48,80,19,469 |
| ಬಿಎಂಟಿಸಿ ಬಸ್ ಪಾಸ್ | 0 | 0 | 0 | 5,24,79,000 | 4,598 | 5,94,300 | 50,969 | 59,49,39,450 | 12,581 | 15,50,59,800 | 68,148 | 80,30,72,550 |
| ವಸತಿ ಸೌಲಭ್ಯ | 0 | 0 | 0 | 0 | 5,129 | 76,00,00,000 | 0 | 0 | | | 5,129 | 76,00,00,000 |

| | | | | | | | | | | | | |
|---|---|---|---|---|---|---|---|---|---|---|---|---|
| ಶಿಶು ಪಾಲನಾ ಕೇಂದ್ರಗಳ ಸ್ಥಾಪನೆ | 0 | 0 | 0 | 0 | 501 | 30,00,000 | 218 | 57,63,296 | 3,350 | 5,20,42,887 | 4,069 | 6,08,06,183 |
| ತಾಯಿ ಮಗು ಸಹಾಯ ಹಸ್ತ | 0 | 0 | 0 | 0 | 0 | 0 | 27 | 1,62,000 | 184 | 11,04,000 | 211 | 12,66,000 |
| ಒಟ್ಟು | **15,973** | **8,95,92,249** | **2,64,414** | **2,81,01,37,740** | **2,71,394** | **3,56,34,28,983** | **2,28,986** | **2,23,35,92,590** | **2,07,501** | **2,23,42,53,387** | **9,88,268** | **10,93,10,04,949** |